# ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಹಿರಿಯೂರು

## ಸಿ.ಸಿ ಸಂಖ್ಯೆಃ 1096/2020

| | | | |
|---|---|---|---|
| ಸಾಕ್ಷಿದಾರರ ಹೆಸರು | – | ಅಕ್ಬರ್ | ಸಿಡಬ್ಲ್ಯೂ-4 |
| ತಂದೆಯ/ಗಂಡನ ಹೆಸರು | – | ಜಾಫರ್ ಸಾಬ್ | ಪಿಡಬ್ಲ್ಯೂ-4 |
| ವಯಸ್ಸು | – | ಸು. 41 ವರ್ಷ | ಪ್ರ.ವ.ಬೋ ದಿನಾಂಕಃ22.08.2024 |
| ಉದ್ಯೋಗ | – | ಕೂಲಿ ಕೆಲಸ | |
| ವಾಸ | – | ಚಿತ್ರದುರ್ಗ | |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿಯವರಿಂದಃ-**

ಸಾಕ್ಷಿಗೆ ನಿಪಿ-2 ಮತ್ತು 3 ರ ದಾಖಲೆಗಳನ್ನು ತೋರಿಸಿದ್ದು, ಅವುಗಳಲ್ಲಿರುವ ತನ್ನ ಸಹಿಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದರಿಂದ ನಿಪಿ-2 ಮತ್ತು 3 ರಲ್ಲಿರುವ ಸಾಕ್ಷಿಯ ಸಹಿಗಳನ್ನು **ನಿಪಿ-2(ಬಿ) ಮತ್ತು ನಿಪಿ-(ಬಿ)** ಎಂದು ಗುರುತಿಸಲಾಯಿತು. ನಿಪಿ-2 ಮತ್ತು 3 ಕ್ಕೆ ಈಗ ಸುಮಾರು 4 ವರ್ಷಗಳ ಹಿಂದೆ ಐಮಂಗಲ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದೇನೆ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ, ಯಾವುದೇ ನಕಾಶೆ ತಯಾರಿಸಿರುವುದಿಲ್ಲ. ಪಂಚನಾಮೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲಿನಲ್ಲಿ ಕೇಳುವ ಪ್ರಶ್ನೆಗಳನ್ನು ಕೇಳಲು ಅನುಮತಿ ನೀಡಲಾಯಿತು).

**ಪಾಟೀ-ಸವಾಲುಃ ಮಾನ್ಯ ಎಪಿಪಿಯವರಿಂದಃ-**

ದಿನಾಂಕಃ25.05.2019 ರಂದು ಮಧ್ಯಾಹ್ನ 3.00 ಗಂಟೆಗೆ ಪೊಲೀಸ್‌ರು ಅಪಘಾತ ಸ್ಥಳವಾದ ಗುಯಿಲಾಳು ಟೋಲ್ ಪ್ಲಾಜಾ ಬಳಿ ಭೇಟಿ ನೀಡಿದ್ದು ಅಲ್ಲಿ ಚಾಸಾ-2 ರವರು ತೋರಿಸಿಕೊಟ್ಟಂತೆ ನಮ್ಮ

ಸಮಕ್ಷಮ ನಿಪಿ-2 ರಂತೆ ಸ್ಥಳ ಪಂಚನಾಮೆ ಮಾಡಿ ನಿಪಿ-3 ರಂತೆ ಕಚ್ಚಾ ನಕಾಶೆಯನ್ನು ತಯಾರಿಸಿ ಸ್ಥಳದಲ್ಲಿ ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ-ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.**

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು).

ಓ ಹೇ ಕೇ ಸರಿ ಇದೆ

ಸಿ/ಸಿ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹಿರಿಯೂರು.